ಕರ್ನಾಟಕ ಸರ್ಕಾರ

**ಅರಣ್ಯ ಇಲಾಖೆ**

**ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಮುಖ್ಯಸ್ಥರು, ಅರಣ್ಯ ಪಡೆ) ಹಾಗೂ ಆಯ್ಕೆ ಪ್ರಾಧಿಕಾರ**
**ಇವರ ಕಛೇರಿ, ಅರಣ್ಯ ಭವನ, ಮಲ್ಲೇಶ್ವರಂ, ಬೆಂಗಳೂರು-560003**

**ಪ್ರಕಟಣೆ**

**ಅಧಿಸೂಚನೆ ಸಂಖ್ಯೆ: ಬಿ9-ನೇಮಕಾತಿ-ವಿವ-3/2017-18 ದಿನಾಂಕ: 24-03-2018**

73 ವಲಯ ಅರಣ್ಯಾಧಿಕಾರಿ ಹುದ್ದೆಗಳ ನೇರ ನೇಮಕಾತಿ ಕುರಿತಂತೆ ದಿನಾಂಕ: 06.07.2019 ರ ಈ ಕಛೇರಿಯ ಪ್ರಕಟಣೆ ಮೂಲಕ ಅಂತಿಮ ಆಯ್ಕೆ ಪಟ್ಟಿಯನ್ನು ಪ್ರಕಟಿಸಲಾಗಿರುತ್ತದೆ. ಸದರಿ ಆಯ್ಕೆ ಪಟ್ಟಿಯಲ್ಲಿ ಕುಮಾರಿ ವೈಶಾಖಿ ಪಿ. ಚಂದ್, ನೋಂದಣಿ ಸಂಖ್ಯೆ: 972358 ಇವರನ್ನು ಪರಿಶಿಷ್ಠ ಜಾತಿ – ಮಹಿಳೆ ಕೋಟಾದಡಿ ಆಯ್ಕೆ ಮಾಡಲಾಗಿರುತ್ತದೆ. ಈ ಅಭ್ಯರ್ಥಿಯು ಕೇರಳ ರಾಜ್ಯದ ಮೂಲ ನಿವಾಸಿಯಾಗಿದ್ದು, ಆಯ್ಕೆ ಸಂದರ್ಭದಲ್ಲಿ ತಹಶೀಲ್ದಾರರು, ನೆಯ್ಯಟ್ಟಿನ್‌ಕರ (NEYYATTINKARA) ತಾಲ್ಲೂಕು, ತಿರುವನಂತಪುರಂ (THHIRUVANANTHAPURAM) ಜಿಲ್ಲೆ ಇವರು ನೀಡಿರುವ ಪರಿಶಿಷ್ಠ ಜಾತಿ (ಅಯ್ಯನವರ್) ಪ್ರಮಾಣ ಪತ್ರವನ್ನು ಸಲ್ಲಿಸಿರುತ್ತಾರೆ.

ಆದರೆ, ಹೊರ ರಾಜ್ಯದ ಅಭ್ಯರ್ಥಿಗಳು ರಾಜ್ಯ ವೃಂದದ ಸರ್ಕಾರಿ ಹುದ್ದೆಗೆ ಅರ್ಜಿ ಸಲ್ಲಿಸಿದಲ್ಲಿ ಜಾತಿ ಮೀಸಲಾತಿಯನ್ನು ಕ್ಲೇಮ್ ಮಾಡಲು ನಿಯಮಗಳಲ್ಲಿ ಅವಕಾಶವಿರುವುದಿಲ್ಲ ಎಂದು ಕೆಲವು ಅಭ್ಯರ್ಥಿಗಳು ಈ ಕಛೇರಿಗೆ ಆಕ್ಷೇಪಣೆ ಸಲ್ಲಿಸಿರುತ್ತಾರೆ. ಸದರಿ ಆಕ್ಷೇಪಣೆಗಳನ್ನು ಈ ಕಛೇರಿಯಲ್ಲಿ ಪರಿಶೀಲಿಸಿ, ಈ ಕುರಿತು ಸರ್ಕಾರದಿಂದ ಸ್ಪಷ್ಟೀಕರಣ ಪಡೆದು ಮುಂದಿನ ಕ್ರಮ ಕೈಗೊಳ್ಳಬೇಕಾಗಿರುತ್ತದೆ.

ಆದ್ದರಿಂದ, ಕುಮಾರಿ ವೈಶಾಖಿ ಪಿ. ಚಂದ್, ನೋಂದಣಿ ಸಂಖ್ಯೆ: 972358 ಇವರ ಮೀಸಲಾತಿ ಕುರಿತು ಸರ್ಕಾರದ ಸಮಾಜ ಕಲ್ಯಾಣ ಇಲಾಖೆಯಿಂದ ಸ್ಪಷ್ಟೀಕರಣ ಪಡೆಯುವರೆಗೆ ವಲಯ ಅರಣ್ಯಾಧಿಕಾರಿ ಹುದ್ದೆಯ ಆಯ್ಕೆಯನ್ನು ತಾತ್ಕಾಲಿಕವಾಗಿ ತಡೆಹಿಡಿಯಲಾಗಿದೆ.

ಬೆಂಗಳೂರು
ದಿನಾಂಕ: 16-11-2019

ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ
(ಮುಖ್ಯಸ್ಥರು, ಅರಣ್ಯ ಪಡೆ)